# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1417 (1798)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು

ವಿಷಯ : ವೈಜ್ಞಾನಿಕ ಕಸ ವಿಲೇವಾರಿ ಘಟಕಗಳ ಬಗ್ಗೆ

(ಅ) ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ 11 `ಬಿ' ಖಾತೆಗಳು ರಿಜಿಸ್ಟ್ರೇಷನ್ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, 11 `ಬಿ' ಖಾತೆಯ ಪರಭಾರೆ ನಡೆಸಲು ಸರ್ಕಾರ ಹಿಂಪಡೆಯಲು ಕಾರಣವೇನು; (ಸಂಪೂರ್ಣ ವಿವರ ನೀಡುವುದು)

(ಆ) ಗ್ರಾಮ ಪಂಚಾಯತಿಗಳಲ್ಲಿ 11 `ಬಿ' ಖಾತೆ ಮಾಡಿಕೊಂಡು ಪರವಾನಗಿ ಪಡೆದುಕೊಂಡು ನಂತರ ಬ್ಯಾಂಕುಗಳು ಇಂತಹ ಖಾತೆಗಳಿಗೆ ಸಾಲ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ನ್ಯೂನತೆ ಸರಿಪಡಿಸಲು ಸರ್ಕಾರ ಯಾವ ಕ್ರಮಕ್ಕೈಗೊಂಡಿದೆ ; (ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಗ್ರಾಮ ಪಂಚಾಯತಿಗಳಲ್ಲಿ ವೈಜ್ಞಾನಿಕ ಕಸ ವಿಲೇವಾರಿ ಘಟಕ ಮಂಜೂರಾಗಿದೆ; ಇದರಲ್ಲಿ ಕಾರ್ಯಾರಂಭ ಮಾಡಿರುವ ಘಟಕವೆಷ್ಟು; ಬಾಕಿ ಇರುವ ಘಟಕವನ್ನು ಯಾವಾಗ ಪ್ರಾರಂಭ ಮಾಡಲಾಗುವುದು ; ವಿಳಂಬಕ್ಕೆ ಕಾರಣವೇನು ; (ತಾಲ್ಲೂಕುವಾರು, ಪಂಚಾಯತಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಗ್ರಾಮ ಪಂಚಾಯತಿಗಳಲ್ಲಿ ವೈಜ್ಞಾನಿಕವಾಗಿ ತಯಾರಾಗುವ ಗೊಬ್ಬರವನ್ನು ವಿಲೇವಾರಿ ಮಾಡಲು ಸರ್ಕಾರ ನಿಗದಿಪಡಿಸಲಾಗಿರುವ ಮಾರ್ಗಸೂಚಿಗಳಾವುವು ; ಈ ಯೋಜನೆಯನ್ನು ಜಿಲ್ಲೆಯ ಯಾವ ಯಾವ ಪಂಚಾಯತಿಗಳಲ್ಲಿ ಅಳವಡಿಸಿಕೊಳ್ಳಲಾಗಿದೆ? (ವಿವರ ನೀಡುವುದು)